ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ 8411 ಖಾಸಗಿ ಅನುದಾನರಹಿತ ಪ್ರಾಥಮಿಕ ಶಾಲೆಗಳು ಇರುತ್ತವೆ.

ಆ) ರಾಜ್ಯದಲ್ಲಿರುವ ಅನುದಾನರಹಿತ ಮತ್ತು ಅನುದಾನಿತ ಪ್ರಾಥಮಿಕ ಶಾಲೆಗಳನ್ನು ಶಿಕ್ಷಣ ಕಾಯ್ದೆ 1983 ರ ಅಡಿಯಲ್ಲಿ ನೋಂದಾವಣೆ, ಮಾನ್ಯತೆ ನವೀಕರಣ ಮಾಡುವ ಸಂದರ್ಭದಲ್ಲಿ, ಸರ್ಕಾರವು ನಿಗದಿಪಡಿಸಿರುವ ಪಠ್ಯಕ್ರಮ, ಮೂಲಭೂತ ಸೌಕರ್ಯಗಳು, ಪಠ್ಯಪುಸ್ತಕ ವೇಳಾಪಟ್ಟಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಅನುಸರಿಸುತ್ತಿರುವ ಬೋಧನಾ ಕ್ರಮಗಳನ್ನು ಪಾಲಿಸಲು ಸ್ಪಷ್ಟವಾದ ನಿಯಮಗಳು ಇದೆ. ಹಾಗೂ ಇಲಾಖೆಯ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಮೇಲ್ಕಂಡ ನಿಯಮಗಳನ್ನು ಪಾಲಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಲಾಗುತ್ತಿದೆ.

848 ಶ್ರೀ ಜಾರ್ಜ್ ಕೆ.ಜೆ. : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞ ನಗರ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು;

ಆ) ಸರ್ಕಾರದ ನಿಯಮಗಳಂತೆ ವಿದ್ಯಾರ್ಥಿಗಳ ಅನುಪಾತಕ್ಕೆ ತಕ್ಕಂತೆ ಶಿಕ್ಷಕರನ್ನು ಒದಗಿಸಲಾಗಿದೆಯೇ; (ಶಿಕ್ಷಕರ ಖಾಲಿ ಹುದ್ದೆಗಳ ಮಾಹಿತಿಯನ್ನು ಒದಗಿಸುವುದು);

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ)

ಪ್ರಾಥಮಿಕ ಶಾಲೆಗಳ ಸಂಖ್ಯೆ	ಪ್ರೌಢ ಶಾಲೆಗಳ ಸಂಖ್ಯೆ
ಕಿರಿಯ ಪ್ರಾಥಮಿಕ ಶಾಲೆ –12 ಹಿರಿಯ ಪ್ರಾಥಮಿಕ ಶಾಲೆ –20 **ಒಟ್ಟು –32**	ಇಲ್ಲ

ಆ)

ಶಿಕ್ಷಕರ ಮತ್ತು ಮಕ್ಕಳ ಅನುಪಾತವು 33: 38 ಇದ್ದು, ನಿಯಮಾನುಸಾರ ಇರುವುದಕ್ಕಿಂತ ಕಡಿಮೆ ಇರುತ್ತದೆ. 6 ಶಿಕ್ಷಕರ ಹುದ್ದೆಗಳು ಖಾಲಿ ಇದ್ದು; ಸದರಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ.	ಪ್ರೌಢ ಶಾಲೆಗಳು ಇಲ್ಲ

840 ಶ್ರೀ ಅಭಯಚಂದ್ರ ಜೈನ್ .ಕೆ. : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಲ್ಕಿ –ಮೂಡುಬಿದ್ರೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಿರಿಯ/ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರುಗಳು ಪದೇ ಪದೇ ಸಭೆಗಳಲ್ಲಿ ಭಾಗವಹಿಸುತ್ತಿರುವುದರಿಂದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅಡಚಣೆ ಉಂಟಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ

ಆ) ಯಾವುದಾದರೂ ನಿರ್ದಿಷ್ಟ ಪ್ರಕರಣಗಳಿದ್ದು, ಮಾಹಿತಿ ನೀಡಿದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

502 ಶ್ರೀ ಕೃಷ್ಣಮೂರ್ತಿ ಕೆ.ಎಂ. : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು ಯಾವುದು?

ಆ) ಪ್ರಾಥಮಿಕ ಶಿಕ್ಷಣದ ಶೈಕ್ಷಣಿಕ ಗುಣಮಟ್ಟದ ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;